# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆಂಟನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ:27ನೇ ಡಿಸೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಕಾರ್ಯದರ್ಶಿಯವರು:-**

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2022ನೇ ಸಾಲಿನ ಕರ್ನಾಟಕ ಸ್ಟಾಂಪು (ನಾಲ್ಕನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದಿಡುವುದು.

### 03. ವರದಿಗಳನ್ನೊಪ್ಪಿಸುವುದು

**ಶ್ರೀ ಎಸ್.ರವಿ (ಸದಸ್ಯರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ 2021-22ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಈ ಕೆಳಕಂಡ ವರದಿಗಳನ್ನೊಪಿಸುವುದು.

01. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಕವಚ-108ಕ್ಕೆ ಸಂಬಂಧಿಸಿದ 8ನೇ ವರದಿ.
02. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ಸಂಬಂಧಿಸಿದ "ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ" ಕುರಿತ 9ನೇ ವರದಿ.

### 04. ಶಾಸನ ರಚನೆ

**<u>ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>**

ಕರ್ನಾಟಕ ಸ್ಟಾಂಪು (ನಾಲ್ಕನೇ ತಿದ್ದುಪಡಿ) ವಿಧೇಯಕ, 2022

**ಶ್ರೀ ಆರ್.ಅಶೋಕ (ಮಾನ್ಯ ಕಂದಾಯ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಸ್ಟಾಂಪು (ನಾಲ್ಕನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಅರುಣ್ ಡಿ.ಎಸ್.** ಅವರು 1975ನೇ ಇಸವಿಯ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಕರ್ನಾಟಕದಲ್ಲಿ ಸೆರೆಮನೆವಾಸ ಅನುಭವಿಸಿದವರಿಗೆ ವಿವಿಧ ರಾಜ್ಯಗಳಲ್ಲಿ ನೀಡುತ್ತಿರುವಂತೆ ಪಿಂಚಣಿ ಅಥವಾ ಗೌರವಧನವನ್ನು ನೀಡುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನಂಗಡಿ ಪೇಟೆಯಲ್ಲಿ ತೆರೆದ ಚರಂಡಿಯ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆಯನ್ನು ಪರಿಣಾಮಕಾರಿಯಾಗಿ ಅಳವಡಿಸುವ ಕುರಿತು ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

03. **ಶ್ರೀ ಸಿ.ಎನ್. ಮಂಜೇಗೌಡ ಹಾಗೂ ಶ್ರೀ ಸೂರಜ್ ರೇವಣ್ಣ** ಅವರುಗಳು ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯ ಅತಿಥಿ ಗೃಹದಲ್ಲಿನ ಪಾರಂಪರಿಕ ಪೀಠೋಪಕರಣಗಳು ಸಂಸ್ಥೆಯಲ್ಲಿ ಲಭ್ಯವಿಲ್ಲದಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

04. **ಶ್ರೀ ಎಸ್.ರುದ್ರೇಗೌಡ** ಅವರು ಶಿವಮೊಗ್ಗ ಜಿಲ್ಲೆಯಲ್ಲಿನ ಸರ್ಕಾರಿ ಸ್ವಾಮ್ಯದಲ್ಲಿರುವ ಪ್ರತಿಷ್ಠಿತ "ದಿ ಮೈಸೂರು ಪೇಪರ್ ಮಿಲ್" ಕಾರ್ಖಾನೆ (ಎಂಪಿಎಂ) 2016ರಿಂದ ಸ್ಥಗಿತಗೊಂಡಿರುವುದರಿಂದ ಉದ್ಭವಿಸಿರುವ ಸಮಸ್ಯೆಗಳ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

05. **ಶ್ರೀ ಪುಟ್ಟಣ್ಣ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಬೆಂಗಳೂರು ನಗರ ಜಿಲ್ಲೆ ಕೆಂಗೇರಿ ಹೋಬಳಿ ಕೊಮ್ಮಘಟ್ಟ ಗ್ರಾಮದ ಸರ್ವೆ ನಂ.30ರಲ್ಲಿ ಭೂಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ಮಾಲೀಕರಿಗೆ ಅಭಿವೃದ್ಧಿ ಆಗಿರುವ ನಿವೇಶನವನ್ನು ಮಂಜೂರು ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

06. **ಶ್ರೀಯುತರುಗಳಾದ ವೈ.ಎಂ. ಸತೀಶ್, ಶಶೀಲ್ ಜಿ. ನಮೋಶಿ, ಆಯನೂರು ಮಂಜುನಾಥ್** ಹಾಗೂ ಇತರರುಗಳು ಚಾರ್‌ಧಾಮ್ ಯಾತ್ರಾರ್ಥಿಗಳಿಗೆ ನೀಡಲಾಗುವ ಆರ್ಥಿಕ ಸಹಾಯಕ್ಕೆ ಸಲ್ಲಿಸಲಾಗುವ ಅರ್ಜಿಯಲ್ಲಿ ನಮೂದಿಸಲಾಗಿರುವ ಮಾನದಂಡಗಳಿಗೆ ತಿದ್ದುಪಡಿ/ಪರಿಷ್ಕರಣಾ ಮಾರ್ಗಸೂಚಿಗಳನ್ನು ಪ್ರಕಟಿಸುವ ಕುರಿತು ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಯು.ಬಿ.ವೆಂಕಟೇಶ್ ಹಾಗೂ ಶ್ರೀ ಮುನಿರಾಜು ಗೌಡ ಪಿ.ಎಂ. ಅವರುಗಳು** ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವವರ ವಿರುದ್ಧ ಈವರೆವಿಗೂ ಕ್ರಮ ಕೈಗೊಳ್ಳದಿರುವ ಹಾಗೂ ಹಣ ಹೂಡಿಕೆ ಮಾಡಿ ವಂಚಿತರಾದವರಿಗೆ ಪರಿಹಾರ ಒದಗಿಸದಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಪ್ರಕಾಶ್ ಕೆ.ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರುಗಳು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಕಾಣಿಯೂರಿನಲ್ಲಿ ರಾತ್ರಿ ಮಲಗಿ ನಿದ್ರಿಸುತ್ತಿದ್ದ ಜನರ ಮೇಲೆ ಕೈಬಾಂಬುಗಳನ್ನು ಸಿಡಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿ ಕೊಲೆ ಬೆದರಿಕೆ ಹಾಕಿದ್ದು, ಇದರಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿರುವ ಕುರಿತು ಪ್ರಸ್ತಾಪಿಸುವುದು.

3..

೦೩. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಪುಟ್ಟಣ್ಣ, ನಿರಾಣಿ ಹನುಮಂತಪ್ಪ ರುದ್ರಪ್ಪ ಹಾಗೂ ಎಸ್.ವ್ಹಿ ಸಂಕನೂರ** ಅವರುಗಳು 01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯಿಂದ ನಿವೃತ್ತಿ ನಂತರ ಪಿಂಚಣಿ ಸೌಲಭ್ಯವಿಲ್ಲದೆ ಜೀವನ ನಿರ್ವಹಣೆ ಕಷ್ಟಕರವಾಗಿರುವ ಕುರಿತು ಪ್ರಸ್ತಾಪಿಸುವುದು.

೦೪. **ಡಾ.ತೇಜಸ್ವಿನಿಗೌಡ** ಅವರು ಜಮ್ಮು ಕಾಶ್ಮೀರದ ನಿರಾಶ್ರಿತ ಪಂಡಿತರಿಗೆ ಕರ್ನಾಟಕ ರಾಜ್ಯದಲ್ಲಿ ಅಶ್ರಯ ನೀಡಿ ರಕ್ಷಿಸುವ ಕುರಿತು ಪ್ರಸ್ತಾಪಿಸುವುದು.

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

೦1. ಹಲಾಲ್ ಪ್ರಮಾಣೀಕೃತ ಆಸ್ಪತ್ರೆಗಳ ಕುರಿತು ದಿನಾಂಕ: 26.12.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:87 (724)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎನ್. ರವಿಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦೨. ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು ದಿನಾಂಕ: 26.12.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:89 (760)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಶಶೀಲ್ ಜಿ. ನಮೋಶಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | | |
|---|---|---|
| 1. | **ಶ್ರೀಯುತರುಗಳಾದ;–** | |
| | ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಹಾಗೂ ಇತರರು. | ಕರ್ನಾಟಕ– ಮಹಾರಾಷ್ಟ್ರ ಗಡಿ ವಿವಾದವನ್ನು ಶಾಶ್ವತವಾಗಿ ಪರಿಹರಿಸುವಲ್ಲಿ ಸರ್ಕಾರವು ವಿಫಲವಾಗಿರುವ ಕುರಿತು. |
| 2. | ಕೆ.ಎ. ತಿಪ್ಪೇಸ್ವಾಮಿ, ಶರವಣ ಟಿ.ಎ., ಸಿ.ಎನ್. ಮಂಜೇಗೌಡ ಮತ್ತು ಸೂರಜ್ ರೇವಣ್ಣ ಅವರುಗಳು | ಬೆಂಗಳೂರು ಮಹಾನಗರ ಪಾಲಿಕೆವತಿಯಿಂದ ಬೆಂಗಳೂರು ವಿಧಾನ ಸಭಾ ಕ್ಷೇತ್ರದ ಮತದಾರರಲ್ಲಿ ಮತದಾನದ ಬಗ್ಗೆ ಜಾಗೃತಿ ಮತ್ತು ಅರಿವು ಮೂಡಿಸಲು ನೇಮಿಸಲಾಗಿದ್ದ "ಚಿಲುಮೆ" ಖಾಸಗಿ ಸಂಸ್ಥೆಯು ಮತದಾರರ ಮಾಹಿತಿಗಳನ್ನು ಕಲೆಹಾಕುವ ಮೂಲಕ ಅಕ್ರಮವೆಸಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**